**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ವಿವಿಧ ವರ್ಗಗಳ ಮಾರಾಟಗಾರರ ನಮೂದಿತ ಪಟ್ಟಿಯ ಕುರಿತು.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ7ವಿಮಅ 2006, ಬೆಂಗಳೂರು ದಿನಾಂಕ:09.01.07.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ74ವಿಮಅ 2005 ,ಬೆಂಗಳೂರು ದಿನಾಂಕ:05.01.09.

ಪ್ರಸ್ತಾವನೆ:

ರಾಜ್ಯದಲ್ಲಿರುವ ವಿವಿಧ ಸರ್ಕಾರಿ ಕಛೇರಿಗಳಲ್ಲಿ ಗಣಕೀಕರಣಕ್ಕಾಗಿ ಅವಶ್ಯವಿರುವ ಗಣಕ ಯಂತ್ರಗಳು,ಪ್ರಿಂಟರ್‌ಗಳು,ಅವುಗಳ ಪೂರಕ ಸಾಧನಗಳು, ವಿವಿಧ ತಂತ್ರಾಂಶಗಳು ತಂತ್ರಾಂಶ ಸಿದ್ಧಪಡಿಸುವ ನೆಟ್ ವರ್ಕಿಂಗ್, ಯು.ಪಿ.ಎಸ್, ತರಬೇತಿ,ವೆಬ್ ಡಿಸೈನಿಂಗ್,ಡೇಟಾ ಎಂಟ್ರಿ ಹಾಗೂ ವಾರ್ಷಿಕ ನಿರ್ವಹಣೆ ಮುಂತಾದ ಸಾಮಗ್ರಿ/ಸೇವೆಗಳನ್ನು ಪೂರೈಸುವುದಕ್ಕಾಗಿ ನಾನಾ ಸಂಸ್ಥೆಗಳನ್ನು ಸಂಕ್ಷಿಪ್ತಗೊಳಿಸಿ,ಮಾರಾಟಗಾರರ ಪಟ್ಟಿಗೆ (1)ರಲ್ಲಿ ಓದಲಾದ ಸರ್ಕಾರದ ಆದೇಶದ ಮೂಲಕ ಅನುಮೋದನೆ ನೀಡಲಾಗಿತ್ತು. ಸದರಿ ಪಟ್ಟಿಯಲ್ಲಿರುವ ಸಂಸ್ಥೆಗಳ ಸಿಂಧುತ್ವವು 31.12.2008ಗೆ ಕೊನೆಗೊಂಡಿರುತ್ತದೆ. 2009-2010 ನೇ ಸಾಲಿಗೆ ಹೊಸ ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆ ಅಂತಿಮವಾಗಿದ್ದಿಲ್ಲವಾದ್ದರಿಂದ, ಮೇಲೆ(2)ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ಚಾಲ್ತಿಯಲ್ಲಿದ್ದ ಮಾರಾಟಗಾರರ ಪಟ್ಟಿಯ ಸಿಂಧುತ್ವವನ್ನು 31.03.2009ರವರೆಗೆ ವಿಸ್ತರಿಸಲಾಗಿತ್ತು, ಆದರೆ ಹೊಸ ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆ ಇನ್ನೂ ಪೂರ್ಣಗೊಂಡಿಲ್ಲವಾದ್ದರಿಂದ ಮೇಲೆ ಓದಲಾದ ಸರ್ಕಾರದ ಆದೇಶದನ್ವಯ ಚಾಲ್ತಿಯಲ್ಲಿದ್ದ ಮಾರಾಟಗಾರರ ಪಟ್ಟಿಯ ಸಿಂಧುತ್ವವನ್ನು 31-07-2009ರವರೆಗೆ ಅಥವಾ ಹೊಸ ಪಟ್ಟಿ ಸಿದ್ಧಗೊಳ್ಳುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ವಿಸ್ತರಿಸುವುದು ಅವಶ್ಯವಾಗಿದೆ. ಅದರಂತೆ ಕೆಳಕಾಣಿಸಿದ ಸರ್ಕಾರದ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 74 ವಿಮಅ 2005, ಬೆಂಗಳೂರು, ದಿನಾಂಕ: 31 ನೇ ಮಾರ್ಚ್2009**

ರಾಜ್ಯದಲ್ಲಿರುವ ವಿವಿಧ ಸರ್ಕಾರಿ ಕಛೇರಿಗಳಲ್ಲಿ ಗಣಕೀಕರಣಕ್ಕಾಗಿ ಅವಶ್ಯವಿರುವ ಗಣಕ ಯಂತ್ರಗಳು,ಪ್ರಿಂಟರ್‌ಗಳು , ಅವುಗಳ ಪೂರಕ ಸಾಧನಗಳು, ವಿವಿಧ ತಂತ್ರಾಂಶಗಳು,ತಂತ್ರಾಂಶ ಸಿದ್ಧಪಡಿಸುವ ನೆಟ್ ವರ್ಕಿಂಗ್,ಯು.ಪಿ.ಎಸ್., ತರಬೇತಿ , ವೆಬ್ ಡಿಸೈನಿಂಗ್, ಡೇಟಾ ಎಂಟ್ರಿ ಹಾಗೂ ವಾರ್ಷಿಕ ನಿರ್ವಹಣೆ ಮುಂತಾದ ಸಾಮಗ್ರಿ/ಸೇವೆಗಳನ್ನು ಪೂರೈಸುವುದಕ್ಕಾಗಿ ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿನ ಸಂಸ್ಥೆಗಳ ಸಿಂಧುತ್ವವನ್ನು ದಿನಾಂಕ 31-07-2009ರವರೆಗೆ ಅಥವಾ ಹೊಸ ಪಟ್ಟಿ ಸಿದ್ಧಗೊಳ್ಳುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ವಿಸ್ತರಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

( ಚಂದ್ರಶೇಖರ್)
ಪೀಠಾಧಿಕಾರಿ, ಇ-ಆಡಳಿತ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಆಸು)

ಇವರಿಗೆ:

1. ಮಹಾಲೇಖಪಾಲರು,ಆಡಿಟ್1 ಮತ್ತು 2,ಕರ್ನಾಟಕ,ಬೆಂಗಳೂರು.
2 ಖಜಾನಾಧಿಕಾರಿ,ರಾಜ್ಯ ಹುಜೂರ್ ಖಜಾನೆ,ಬೆಂಗಳೂರು
3.ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
4.ಸಂಕಲನಕಾರರು,ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.
5. ಸರ್ಕಾರದ ಅಧೀನ ಕಾರ್ಯದರ್ಶಿ,ಆರ್ಥಿಕ ಇಲಾಖೆ, ಬೆಂಗಳೂರು.
6.ಸಂಬಂಧಪಟ್ಟ ಸಂಸ್ಥೆಗಳು.
7.ಶಾಖಾರಕ್ಷಕ ಕಡತ/ಹೆಚ್ಚುವರಿ ಪ್ರತಿಗಳು